21/12/2022
148th, ಕ್ರ.ಸಂ. 14,

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ತಿಪ್ಪೇಸ್ವಾಮಿ ಇವರು ಮಂಡಿಸಿರುವ ಶೂನ್ಯ ವೇಳೆ ಪ್ರಸ್ತಾಪಕ್ಕೆ ಉತ್ತರ**

**ಪ್ರಸ್ತಾಪ:**

ರಾಜ್ಯದಲ್ಲಿ ಬೀದಿ ನಾಯಿಗಳ ಉಪಟಳ ಅತಿಯಾಗಿದ್ದು, ಸರ್ಕಾರವು ಈ ಬೀದಿ ನಾಯಿಗಳ ಸಂಖ್ಯೆಯನ್ನು ಮತ್ತು ಕಾಟವನ್ನು ನಿಯಂತ್ರಿಸಲು ವಿಫಲವಾಗಿದೆ. ತಡರಾತ್ರಿ ಕೆಲಸ ಮುಗಿಸಿ ಮನೆಗೆ ಹೊರಡುವ ಹಾಗೂ ರಾತ್ರಿ ಸಮಯದಲ್ಲಿ ವಿಹಾರಕ್ಕೆ ತೆರಳುವ ನಾಗರಿಕರಿಗೆ ಬೀದಿ ನಾಯಿಗಳು ಆತಂಕಕಾರಿಯಾಗಿ ಪರಿಣಮಿಸಿವೆ. ದ್ವಿಚಕ್ರ ವಾಹನ ಸವಾರರು ಬೀದಿನಾಯಿಗಳಿಂದ ತಪ್ಪಿಸಿಕೊಳ್ಳಲು ಹೋಗಿ ಅಪಘಾತಗಳಾಗುವುದು ಸಾಮಾನ್ಯವಾಗಿದೆ. ರಾಜ್ಯದ ನಗರ ಪ್ರದೇಶಗಳಲ್ಲಿ ಬೀದಿ ನಾಯಿಗಳ ಹಾವಳಿ ಅತೀ ಹೆಚ್ಚಾಗಿದೆ. ಬೆಂಗಳೂರು ನಗರದಲ್ಲಿ ಬೀದಿನಾಯಿಗಳ ಸಂಖ್ಯೆ 1.5 ಲಕ್ಷಗಳಷ್ಟಿದೆ ಮತ್ತು ಅಷ್ಟೇ ಸಂಖ್ಯೆಯಲ್ಲಿ ಸಾಕುವ ನಾಯಿಗಳಿವೆ. ಅದೇ ರೀತಿ ರಾಜ್ಯದ ಇತರೆ ನಗರಗಳಲ್ಲಿ ಮತ್ತು ಪುರಸಭೆಗಳಲ್ಲಿ ಸಹ ಬೀದಿ ನಾಯಿಗಳ ಸಂಖ್ಯೆ ಪ್ರತಿ ವರ್ಷ ಹೆಚ್ಚಾಗುತ್ತಿದೆ. ಬೀದಿ ನಾಯಿಗಳ ಸಂತಾನ ನಿಯಂತ್ರಣ ಶಸ್ತ್ರ ಚಿಕಿತ್ಸೆ ಕಾರ್ಯಕ್ರಮವನ್ನು ವ್ಯವಸ್ಥೆಯಲ್ಲಿ ಜಾರಿಗೊಳಿಸಿ, ನಿಯಂತ್ರಣಗೊಳಿಸಲು ಪಶು ಸಂಗೋಪನೆ ಇಲಾಖೆ ವಿಫಲವಾಗಿದೆ. ಬೆಂಗಳೂರು ನಗರ ಒಂದರಲ್ಲಿ ಪ್ರತಿದಿನ 40-50 ಬೀದಿ ನಾಯಿ ಕಡಿತದಿಂದ ಜನರು ಬಳಲುತ್ತಿದ್ದಾರೆ ಮತ್ತು ಇವುಗಳಲ್ಲಿ ಹಲವರು ಹುಚ್ಚುನಾಯಿ ಕಡಿತದಿಂದ ಬಳಲುತ್ತಿದ್ದಾರೆ. ಶ್ವಾನಗಳ ಸಂತಾನ ನಿಯಂತ್ರಣಕ್ಕೆ ರಾಜ್ಯ ಹೈಕೋರ್ಟ್ ಸಹ ತಾಕೀತು ಮಾಡಿದೆ. ಅಲ್ಲದೆ, ರಾಜ್ಯ ಸರ್ಕಾರ ಶ್ವಾನಗಳ ನಿಯಂತ್ರಣ ಹಾಗೂ ಸಂಖ್ಯೆ ಕಡಿಮೆಗೊಳಿಸಲು ಸುಪ್ರೀಂ ಕೋರ್ಟ್‌ನ ಮೊರೆ ಹೋಗಲು ನಿರ್ಧರಿಸಿದೆ. ಆದರೆ, ವಾಸ್ತವವಾಗಿ ಯಾವುದೇ ಕಾರ್ಯಕ್ರಮಗಳು ಅನುಷ್ಠಾನಗೊಳಿಸುತ್ತಿಲ್ಲ. ಇಂತಹ ಸಾರ್ವಜನಿಕ ಆರೋಗ್ಯಕ್ಕೆ ಸಂಬಂಧಿಸಿದ ವಿಷಯದ ಕಡೆಗೆ ಸರ್ಕಾರ ಕೂಡಲೇ ಗಮನಹರಿಸುವ ಬಗ್ಗೆ.

**ಉತ್ತರ:**

**I. ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ (ಬಿಬಿಎಂಪಿ ಹೊರತುಪಡಿಸಿ) ಬೀದಿನಾಯಿಗಳ ನಿಯಂತ್ರಣಕ್ಕೆ ಈ ಕೆಳಕಂಡ ಕ್ರಮಗಳನ್ನು ಪಾಲಿಸಲಾಗುತ್ತಿದೆ:**

a) ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ (ಬಿಬಿಎಂಪಿ ಹೊರತುಪಡಿಸಿ) ಬೀದಿ ನಾಯಿಗಳ ದಾಳಿಗೆ ಒಳಗಾದ ನಾಗರಿಕರ ಸಂಖ್ಯೆ 14,489 ಗಳಾಗಿದ್ದು, ನಗರ ಸ್ಥಳೀಯ ಸಂಸ್ಥೆಗಳು ಬೀದಿ ನಾಯಿಗಳ ಸಮೀಕ್ಷೆಯನ್ನು ಕೈಗೊಂಡು, ಅವುಗಳನ್ನು ಹಿಡಿದು ಸೂಕ್ತ ಸ್ಥಳದಲ್ಲಿರಿಸಿ ಅವುಗಳಿಗೆ ಸಂತಾನಹರಣ ಚಿಕಿತ್ಸೆ ಹಾಗೂ ರೋಗನಿರೋದಕ ಲಸಿಕೆಯನ್ನು ನೀಡಲು ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ.

b) ಬೀದಿನಾಯಿಗಳ ಸಂತಾನಹರಣ ಚಿಕಿತ್ಸೆಗೆ ನಗರ ಸ್ಥಳೀಯ ಸಂಸ್ಥೆಗಳ ವತಿಯಿಂದ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗುತ್ತಿದೆ.

c) ಸದರಿ ಸೌಲಭ್ಯಗಳಲ್ಲಿ ಪಶು ವೈದ್ಯರ ಮೂಲಕ ಅಥವಾ Animal welfare Board of India ಸಂಸ್ಥೆಯಿಂದ ಮಾನ್ಯತೆ ಪಡೆದು ಹಾಗೂ ಪ್ರಾಣಿ ಜನನ ನಿಯಂತ್ರಣಕ್ಕೆ ಸಂಬಂಧಿಸಿದಂತೆ ಸೂಕ್ತ ತರಬೇತಿ ಮತ್ತುಅನುಭವ ಇರುವ ಸಂಘ ಸಂಸ್ಥೆಗಳ ಮೂಲಕ ಬೀದಿನಾಯಿಗಳಿಗೆ ಸಂತಾನಹರಣ ಚಿಕಿತ್ಸೆ ನೀಡಲು ಕ್ರಮವಹಿಸುವಂತೆ ಸೂಚಿಸಲಾಗಿರುತ್ತದೆ.

d) Animal welfare Board of India ರವರ ವತಿಯಿಂದ ಹೊರಡಿಸಿರುವ ಸುತ್ತೋಲೆ ರೀತ್ಯಾ ಬೀದಿ ನಾಯಿಗಳಿಗೆ ನಿಯಮಾನುಸಾರ ಸಂತಾನಹರಣ ಚಿಕಿತ್ಸೆ ಹಾಗೂ ರೋಗನಿರೋಧಕ ಲಸಿಕೆಯನ್ನು ನೀಡಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಿದ್ದು, ಅದರಂತೆ ಕ್ರಮವಹಿಸಲಾಗುತ್ತಿದೆ.

e) ಪ್ರಾಣಿಗಳ ಮೇಲಿನ ಕ್ರೌರ್ಯವನ್ನು ತಡೆಗಟ್ಟಲು ಸೂಕ್ತವಾದ ಪ್ರಮಾಣಿತ ಕಾರ್ಯಾಚರಣಾ ವಿಧಾನವನ್ನು ಅನುಷ್ಠಾನ ಗೊಳಿಸುವ ಕುರಿತು ಭಾರತೀಯ ಪ್ರಾಣಿ ಕಲ್ಯಾಣ ಮಂಡಳಿ ಹಾಗೂ ಮೀನುಗಾರಿಕೆ, ಪಶುಸಂಗೋಪನೆ ಮತ್ತು ಹೈನುಗಾರಿಕೆ ಸಚಿವಾಲಯದ ವತಿಯಿಂದ ಪ್ರಾಣಿಗಳ ಮೇಲಿನ ಕ್ರೌರ್ಯವನ್ನು ತಡೆಗಟ್ಟುವ ಕಾಯ್ದೆ 1960ರಡಿ ಪ್ರಾಣಿಗಳನ್ನು ರಕ್ಷಿಸಲು / ವಶಪಡಿಸಿಕೊಳ್ಳಲು ಮತ್ತು ಪ್ರಾಣಿಗಳ ಪಾಲನೆಗಾಗಿ ಪ್ರೋಟೋಕಾಲ್ / ಶಿಷ್ಟಾಚಾರ ವನ್ನು ಜಾರಿಗೊಳಿಸಿದ್ದು, ಅದರನ್ವಯ ಕ್ರಮವಹಿಸಲಾಗಿರುತ್ತದೆ.

f) ಸರ್ಕಾರದ ಆದೇಶದ ಸಂಖ್ಯೆ: ನಅಇ 96 ಎಂಡಬ್ಲ್ಯೂಪಿ 2022 ಬೆಂಗಳೂರು, ದಿನಾಂಕ 14-12-2022 ರಂತೆ ನಗರಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ನಾಯಿ ಕಡಿತಕ್ಕೊಳಗಾದ ಬಾಧಿತರಿಗೆ ಸೂಕ್ತ ಪರಿಹಾರ ಹಣ ನೀಡುವ ಸಲುವಾಗಿ ಪ್ರತಿ ಜಿಲ್ಲೆಗಳಲ್ಲಿ ಜಿಲ್ಲಾಧಿಕಾರಿಗಳು, ಶಸ್ತ್ರ ಚಿಕಿತ್ಸಾಧಿಕಾರಿಗಳು, ಜಿಲ್ಲಾ

ಆರೋಗ್ಯಾಧಿಕಾರಿಗಳು ಹಾಗು ಇತರೆ ಅಧಿಕಾರಿಗಳು ಒಳಗೊಂಡಂತೆ ಸಮಿತಿಯನ್ನು ರಚಿಸಿ, ಸದರಿ ವಿಚಾರವಾಗಿ ಸ್ವೀಕರಿಸುವ ಮನವಿಗಳನ್ನು ಪರಿಶೀಲಿಸಿ, ಸೂಕ್ತ ಪರಿಹಾರ ಒದಗಿಸಲು ಸೂಚಿಸಲಾಗಿರುತ್ತದೆ.

**II. ಬಿಬಿಎಂಪಿ ಬೆಂಗಳೂರು ವ್ಯಾಪ್ತಿಯಲ್ಲಿ ಬೀದಿನಾಯಿಗಳ ನಿಯಂತ್ರಣಕ್ಕೆ ಈ ಕೆಳಕಂಡ ಕ್ರಮಗಳನ್ನು ಪಾಲಿಸಲಾಗುತ್ತಿದೆ:**

a) ಮಾನ್ಯ ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದಂತೆ ಹಾಗೂ ಭಾರತೀಯ ಪ್ರಾಣಿ ಕಲ್ಯಾಣ ಮಂಡಳಿಯ ABC Dogs Rules 2001ರ ಮಾರ್ಗಸೂಚಿಯ ಅನುಸಾರ ಬೀದಿನಾಯಿಗಳ ನಿಯಂತ್ರಣಕ್ಕೆ ನಿಯಮಾನುಸಾರ ಸಂತಾನಹರಣ ಶಸ್ತ್ರಚಿಕಿತ್ಸೆ ಕಾರ್ಯಕ್ರಮವನ್ನು ಕೈಗೊಳ್ಳಲಾಗುತ್ತಿದೆ.

b) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಎಲ್ಲಾ ವಲಯಗಳಲ್ಲಿ ಬೀದಿನಾಯಿಗಳ ನಿಯಂತ್ರಣಕ್ಕೆ ನಿರಂತರವಾಗಿ ನಿಯಮಾನುಸಾರ KTPP ಅನುಸಾರ ಟೆಂಡರ್ ಕರೆದು, ಸೇವಾ ಸಂಸ್ಥೆಯವರ ಮುಖೇನ ಸಂತಾನಹರಣ ಶಸ್ತ್ರಚಿಕಿತ್ಸಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿರುತ್ತದೆ. ಪ್ರಸ್ತುತ ಕಾರ್ಯಕ್ರಮವು ಎಲ್ಲಾ ವಲಯಗಳಲ್ಲಿ ಪ್ರಗತಿಯಲ್ಲಿರುತ್ತದೆ.

c) ಸಂತಾನಹರಣ ಶಸ್ತ್ರಚಿಕಿತ್ಸೆಗೊಳಪಡುವ ಎಲ್ಲಾ ಬೀದಿನಾಯಿಗಳಿಗೆ ಹುಚ್ಚುನಾಯಿ ರೋಗ ವಿರುದ್ಧ ಲಸಿಕೆಯನ್ನು ಕಡ್ಡಾಯವಾಗಿ ಹಾಕಲಾಗುತ್ತಿದೆ.

d) ರೇಬಿಸ್ ರೋಗವನ್ನು ನಿಯಂತ್ರಿಸಲು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ವಾರ್ಡ್‌ಗಳಲ್ಲಿ ಬೀದಿನಾಯಿಗಳಿಗೆ ಹುಚ್ಚುನಾಯಿ ರೋಗ ವಿರುದ್ಧ ಲಸಿಕೆ ಹಾಕುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಪ್ರಸ್ತುತ ಕಾರ್ಯಕ್ರಮವು ಪ್ರಗತಿಯಲ್ಲಿರುತ್ತದೆ.

e) ಬೀದಿನಾಯಿಗಳಲ್ಲಿ ಸಂತಾನಹರಣ ಶಸ್ತ್ರಚಿಕಿತ್ಸೆ ಬಗ್ಗೆ, ರೇಬಿಸ್ ರೋಗನಿರೋಧಕ ಲಸಿಕೆ ಅಭಿಯಾನದ ಬಗ್ಗೆ ಹಾಗೂ ನಾಯಿಗಳ ಕಡಿತದ ಸಂದರ್ಭದಲ್ಲಿ ತೆಗೆದುಕೊಳ್ಳಬೇಕಾದ ಕ್ರಮಗಳ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಎಲ್ಲಾ ವಲಯಗಳಲ್ಲೂ ಹಮ್ಮಿಕೊಳ್ಳಲಾಗುತ್ತಿದೆ.

f) ಗಾಯಗೊಂಡ ಮತ್ತು ಅಪಘಾತಕ್ಕೊಳಗಾದ ಬೀದಿನಾಯಿಗಳ ರಕ್ಷಣಾ ಕಾರ್ಯವನ್ನು ವಲಯ ಮಟ್ಟದಲ್ಲಿ ABC/ARV ಕಾರ್ಯಕ್ರಮ ನಿರ್ವಹಿಸುತ್ತಿರುವ ಸೇವಾ ಸಂಸ್ಥೆಯವರು ನಿರ್ವಹಿಸುತ್ತಿರುತ್ತಾರೆ.

g) ಡಬ್ಲ್ಯೂವಿಎಸ್ ಮತ್ತು ಕೇರ್ ಸಂಸ್ಥೆಯ ಸಹಯೋಗದೊಂದಿಗೆ ಬಿಬಿಎಂಪಿಯು ನಾಯಿ ಕಡಿತ ಪ್ರಕರಣ ಹಾಗೂ ರೇಬೀಸ್ ಶಂಕಿತ ಪ್ರಕರಣಗಳ ದೂರುಗಳಿಗಾಗಿ ರೇಬೀಸ್ ಸಹಾಯವಾಣಿ ಸ್ಥಾಪಿಸಲಾಗಿದೆ.

**ಸಂತಾನಹರಣ ಶಸ್ತ್ರ ಚಿಕಿತ್ಸೆ ಹಾಗೂ ರೇಬಿಸ್ ರೋಗ ನಿರೋಧಕ ಲಸಿಕೆಯ ವಿವರ**

| Sl. No. | Year | Animal Birth Control (Sterilization Operation) | Anti Rabies Vaccination |
|---|---|---|---|
| 1 | 2019-20 | 38035 | 37955 |
| 2 | 2020-21 | 47028 | 48969 |
| 3 | 2021-22 | 57481 | 109893 |
| 4 | 2022-23(Till Oct-22) | 28341 | 52770 |

ಬಿ.ಬಿ.ಎಂ.ಪಿ. ವ್ಯಾಪ್ತಿಯಲ್ಲಿ ಬೀದಿನಾಯಿಗಳ ನಿಯಂತ್ರಣಕ್ಕೆ ಈ ಮೇಲಿನ ಕ್ರಮಗಳನ್ನು ಪಾಲಿಸುತ್ತಿರುವುದರಿಂದ ಬೀದಿನಾಯಿಗಳ ದಾಳಿಗೆ ಒಳಗಾದ ನಾಗರಿಕರ ಸಂಖ್ಯೆ ಕಾಲ ಕ್ರಮೇಣ ಕಡಿಮೆಯಾಗುತ್ತಿರುವುದು ಈ ಕೆಳಕಂಡಂತೆ ದೃಢಪಟ್ಟಿರುತ್ತದೆ:

| ಕ್ರ.ಸಂ. | ಸಾಲು | ಬೀದಿ ನಾಯಿಗಳ ದಾಳಿಗೆ ಒಳಗಾದ ನಾಗರೀಕರ ಸಂಖ್ಯೆ |
|---|---|---|
| 1 | 2019-20 | 42,818 |
| 2 | 2020-21 | 18,629 |
| 3 | 2021-22 | 17,610 |

**ಸಂಖ್ಯೆ: ನಅಇ 215 ಎಂಎನ್‌ಇ 2022 (ಇ)**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ